ಆ) ಹೌದು.

ಹಳ್ಳಿಗಾಡಿನಲ್ಲಿ ನಿವೇಶನ ಒದಗಿಸಲು ಗ್ರಾಮೀಣ ನಿವೇಶನ ಯೋಜನೆ ಮೂಲಕ ಲಭ್ಯವಿದ್ದ ಸರ್ಕಾರಿ ಜಮೀನನ್ನು ಅಭಿವೃದ್ಧಿಪಡಿಸಿ ನಿವೇಶನಗಳನ್ನು ಹಂಚಿಕೆ ಮಾಡಲಾಗುತ್ತಿದೆ.

ಒಂದುವೇಳೆ ಸರ್ಕಾರಿ ಜಮೀನು ಲಭ್ಯವಿಲ್ಲದ ಸಂದರ್ಭದಲ್ಲಿ ಖಾಸಗಿ ಜಮೀನನ್ನು ಹಂಚಿಕೆ ಮಾಡಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿದೆ. ಈ ಸಮಿತಿಯ ಮೂಲಕ ಜಮೀನು ಖರೀದಿಸಿ, ಅಭಿವೃದ್ಧಿಪಡಿಸಿ ನಿವೇಶನಗಳನ್ನು ಹಂಚಿಕೆ ಮಾಡಲಾಗುತ್ತಿದೆ. ಅದರಂತೆ ಪ್ರತಿ ವರ್ಷ ನಿವೇಶನ ಯೋಜನೆಯಡಿಯಲ್ಲಿ ಗುರಿಯನ್ನು ನಿಗದಿಪಡಿಸಿ, ನಿವೇಶನ ಹಂಚಿಕೆ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಹೊರಗುತ್ತಿಗೆ ಆಧಾರದ ಶಿಕ್ಷಕರನ್ನು ಖಾಯಂಗೊಳಿಸುವುದು

115 (67) ಶ್ರೀ ತುಕಾರಾಮ್ ಈ (ಸಂಡೂರು) : ಮಾನ್ಯ ಸಮಾಜ ಕಲ್ಯಾಣ ಮತ್ತು ಬಂದೀಖಾನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಯ ಅಧೀನದಲ್ಲಿ ಬರುವ ವಸತಿ ಶಾಲೆಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರಿಗೆ ಖಾಯಂ ನೇಮಕಾತಿ ಮಾಡುವಾಗ ಸದರಿ ಹೊರಗುತ್ತಿಗೆ ಶಿಕ್ಷಕರಿಗೆ ನೇಮಕಾತಿಯಲ್ಲಿ ಅನ್ಯಾಯವಾಗಿರುವುದು ಸರಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರನ್ನು ಹಂತ ಹಂತವಾಗಿ ಸರಕಾರದಿಂದ ನೇಮಕ ಮಾಡಿಕೊಳ್ಳುವ ಪ್ರಕ್ರಿಯೆಯನ್ನು ಯಾವಾಗ ಕೈಗೊಳ್ಳಲಾಗುವುದು?

ಶ್ರೀ ಎ. ನಾರಾಯಣಸ್ವಾಮಿ (ಸಮಾಜ ಕಲ್ಯಾಣ ಮತ್ತು ಬಂದೀಖಾನೆ ಸಚಿವರು) :

ಅ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಯ ಶಿಕ್ಷಕರ ನೇಮಕಾತಿಯಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರಿಗೆ

ಅನ್ಯಾಯವಾಗುವ ಪ್ರಶ್ನೆಯೇ ಇಲ್ಲ ಯಾಕೆಂದರೆ ಹೊರಗುತ್ತಿಗೆ ಶಿಕ್ಷಕರಿಗೂ ಸಹ ನೇಮಕಾತಿಯಲ್ಲಿ ಪರೀಕ್ಷೆ ಬರೆಯಲು ಅವಕಾಶ ನೀಡಲಾಗಿತ್ತು. ಅದರಲ್ಲಿ ಮೆರಿಟ್ ಆಧಾರದ ಮೇಲೆ ನೇಮಕ ಮಾಡಲಾಗಿದೆ. ಮೆರಿಟ್ ಆಧಾರದ ಮೇಲೆ ಆಯ್ಕೆ ಆಗದೆ ಇರುವವರ ಬಗ್ಗೆ ಅನ್ಯಾಯವಾಗಿದೆ ಎಂದು ಭಾವಿಸುವುದು ಸರಿಯಲ್ಲ.

ಆ) ಮೇಲೆ ತಿಳಿಸುವ ಕಾರಣಗಳಿಂದಾಗಿ ಹೊರಗುತ್ತಿಗೆ ಶಿಕ್ಷಕರನ್ನು ಹಂತ ಹಂತವಾಗಿ ಸರ್ಕಾರದಿಂದ ನೇಮಕ ಮಾಡಿಕೊಳ್ಳುವ ಅವಕಾಶ ಇರುವುದಿಲ್ಲ.

ವಿದ್ಯುತ್ ಖರೀದಿ

116 (222) ಶ್ರೀ ದಿನೇಶ್ ಗುಂಡೂರಾವ್ (ಗಾಂಧಿನಗರ) : ಮಾನ್ಯ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2008–09ನೇ ಸಾಲಿನಿಂದ ಇಲ್ಲಿಯ ತನಕ ಎಷ್ಟು ಪ್ರಮಾಣದ ವಿದ್ಯುತ್‌ನ್ನು ಖರೀದಿಸಲಾಗಿದೆ; ಇದಕ್ಕಾಗಿ ಎಷ್ಟು ಹಣವನ್ನು ವೆಚ್ಚ ಮಾಡಲಾಗಿದೆ;

ಆ) ಈ ಪೈಕಿ ಖಾಸಗಿ ಸಂಸ್ಥೆಗಳಿಂದ ಖರೀದಿಸಿರುವ ಪ್ರಮಾಣವೆಷ್ಟು; ಮತ್ತು ವೆಚ್ಚವೆಷ್ಟು; (ವರ್ಷಾವಾರು ಮಾಹಿತಿ ನೀಡುವುದು)

ಇ) ಜಲಾನಯನ ಮೂಲಗಳಿಂದ ರಾಜ್ಯದಲ್ಲಿ ಉತ್ಪಾದನೆಯಾಗುತ್ತಿರುವ ವಿದ್ಯುತ್ ಪ್ರಮಾಣವೆಷ್ಟು; ರಾಜ್ಯದಲ್ಲಿ ಬರಗಾಲ ತಲೆದೋರಿರುವುದರಿಂದ ಮತ್ತು ರಾಜ್ಯಾದ್ಯಂತ ಜಲಾಶಯಗಳ ನೀರಿನ ಮಟ್ಟ ಕುಸಿದಿರುವುದರಿಂದ ವಿದ್ಯುತ್ ಅಭಾವ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕೊರತೆಯನ್ನು ನೀಗಿಸಲು ಸರ್ಕಾರವು ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ.

ಈ) ರಾಜ್ಯದಲ್ಲಿ ಲೋಡ್ ಶೆಡ್ಡಿಂಗ್ ಜಾರಿಯಲ್ಲಿದೆಯೇ; ಇರಲು ಕಾರಣಗಳೇನು?